ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
**ಸಿ.ಸಿ.ನಂ.1739/2016.**

ದಿನಾಂಕಃ**26.11.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ಸತೀಶ್ | ಚಾಸಾ-5, ಪ್ರಾಸಾ-4 |
| ತಂದೆಯ ಹೆಸರು | ಹಾಲಪ್ಪ | |
| ವಯಸ್ಸು (ವರ್ಷಗಳಲ್ಲಿ) | 48 | |
| ಉದ್ಯೋಗ | ವ್ಯವಸಾಯ | |
| ವಾಸ | ಬಿಸಲೇಹಳ್ಳಿ ಗ್ರಾಮ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ 1 ರಿಂದ 4 ಹಾಗೂ ಆರೋಪಿತರು ನನಗೆ ಗೊತ್ತು ಅವರುಗಳು ನನ್ನ ಊರಿನವರು. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಹಾಗುಃ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಪೊಲೀಸರು ಸಾಕ್ಷಿಗೆಂದು ದಾಖಲೆಗೆ ನನ್ನ ಸಹಿ ಪಡೆದರು ಅಷ್ಟೇ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ, ಸದರಿ ದಾಖಲೆಯು ಮಹಜರ್ ಆಗಿದ್ದು ಅದನ್ನು ನಿಪಿ 4 ಎಂದು ಸಾಕ್ಷಿಯ ಸಹಿಯನ್ನುನಿಪಿ4 ಎ ಎಂದು ಗುರುತಿಸಲಾಯಿತು. ಈಗ ನೋಡುತ್ತಿರುವ ಪೋಟೋದಲ್ಲಿ ನಾನು ಇದ್ದೇನೆ, ಅದನ್ನು ನಿಪಿ 5 ಎಂದು ಗುರುತಿಸಲಾಯಿತು. ನಿಪಿ 5 ನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸ ಸ ಅ ರವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀಸವಾಲುಃ ಮಾನ್ಯ ಸ ಸ ಅ ರವರಿಂದ ಃ

ದಿಃ19.05.2016 ರಂದು ಪೊಲೀಸರು ಮಹಜರಿಗೆ ಬರುವಂತೆ ಕೋರಿ, ನಂತರ

ಚಾಸಾ 2 ರವರ ಮನೆಯ ಹಿಂದೆ ಚಾಸಾ 2 ರವರು ತೋರಿಸಿದಂತೆ ನನ್ನ ಮತ್ತು ಚಾಸಾ 6 ರವರ ಸಮಕ್ಷಮ ಬೆಳಗ್ಗೆ 11 ರಿಂದ 11.30 ರ ತನಕ ನಿಪಿ 4 ರಂತೆ ಮಹಜರ್ ಮಾಡಿ ನಿಪಿ 5 ರಂತೆ ಪೋಟೋ ತೆಗೆದು ಆರೋಪಿತರು ಕೃತ್ಯಕ್ಕೆ ಉಪಯೋಗಿಸಿದ ಕಲ್ಲು, ದೊಣ್ಣೆಯನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ಗೊತ್ತಿದ್ದರು ಸಹಃ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ಶ್ರೀ.ಪಿ ಸಿ ಆರ್ ವಕೀಲರಿಂದಃ ಇರುವುದಿಲ್ಲ.
ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.